# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/516/ಗ್ರಾಪಂಕಾ/2016 ದಿನಾಂಕ:20.10.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE-567/2016/ARE-8 Date:11.04.2018
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-567/2016/ARE-8 Date:13.04.2018

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"The DGO Sri. Lakshminarayana H.N, Panchayath Development Officer, D.V Halli Gram Panchayath, Madhugiri TAluk, Tumkur District was tried for the following charge:-

"ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ. ಆಪಾದಿತ ಸರ್ಕಾರಿ ನೌಕರರು ಆದ ನೀವು ಕಾರ್ಯನಿರ್ವಹಿಸುವಾಗ ರಾಜೀವ್ ಗಾಂಧಿ ನಿಗಮದಿಂದ ನಮೂದಾದ ಕೊನೆ ಹಂತದ 25,000/- ರೂಗಳನ್ನು ಫಲಾನುಭವಿಗೆ ನಿಯಮದ ಪ್ರಕಾರ ನೀಡದೆ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ತೋರಿಸಿರುತ್ತೀರಿ. ಆದ ಕಾರಣ ಸರ್ಕಾರಿ ಆಪಾದಿತ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯನಿಷ್ಠೆಯನ್ನು ತೋರಿಸದೆ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ನೀವು ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ) ನಿಯಮಾವಳಿ 1966 ರ 3(1) (i) ಮತ್ತು (ii) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ರವರು ಕೆಲಸ ನಿರ್ವಹಿಸುತ್ತಿದ್ದಾಗ ರಾಜೀವ್ ಗಾಂಧಿ ನಿಗಮದಿಂದ ನಮೂದಾದ ಕೊನೆ ಹಂತದ 25,000/- ರೂಗಳನ್ನು ಫಲಾನುಭವಿಗೆ ನಿಯಮದ ಪ್ರಕಾರ ನೀಡದೆ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ತೋರಿಸಿರುತ್ತಾರೆ.

ಹಿನ್ನೆಲೆಯಲ್ಲಿ ಸರ್ಕಾರಿ ನೌಕರರಾಗಿದ್ದು ತಮ್ಮ ಕರ್ತವ್ಯ ನಿಷ್ಠೆಯನ್ನು ತೋರದೆ ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ ಕೆಸಿಎಸ್(ಸಿಸಿಎ) ನಿಯಮಗಳು 1966 ರ ನಿಯಮ 3(1)(i) to (ii) ರನ್ವಯ ದುರ್ನಡತೆ ಎಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ನಿಯಮ 14-ಎ ಅಡಿ ಇಲಾಖಾ ವಿಚಾರಣೆ ಮಾಡಲು ಲೋಕಾಯುಕ್ತರಿಗೆ ವಹಿಸಲಾಗಿದ್ದು ಮಾನ್ಯ ಉಪಲೋಕಾಯುಕ್ತರು ಸಲ್ಲಿಸಿರುವ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

Whether the Discipliance Authority proved that the DGO while working as Panchayath Development Officer, has shown negligence by not getting released the 4th and final bill under the RHGCL Housing scheme, to the complainant and has failed to maintain absolute integrity, devotion to duty and misconduct, the act of which is Un-becoming of Public /Government servant and thereby DGO has committed misconduct as enumerated U/R 3(1) (i) to (iii) of KCS (Conduct) Rules 1966.

The complainant in her cross examination has stated that she has spent about Rs.2 lakhs for constructing the house. This supports the contention of the DGO that the complaianant has spent more amount than the permissible limits of Rs.75,000/- which admittedly is the unit cost. Ex.P-15(A) also shows that the payment has been withheld by the RHGCL Corporation and not by the DGO. There is no evidence to show that the DGO has committed any negligence. Therefore, it cannot be said that the DGO has delayed of committed any negligence or dereliction of duty or any lapses. Hence, the Disciplinary Authority has failed to prove.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಅಲ್ಲಗಳೆದಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Disciplinary Authority has not proved the charges leveled against the DGo.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರಿಗೆ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಸದರಿಯವರ ವಿರುದ್ಧದ ಪ್ರಕರಣವು ಸಾಬೀತಾಗದೆ ಇರುವುದರಿಂದ ಸದರಿ ಪ್ರಕರಣವನ್ನು ಕೈಬಿಟ್ಟು ಮುಕ್ತಾಯಗೊಳಿಸುವಂತೆ ಆದೇಶಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:516:ಗ್ರಾಪಂಕಾ2016 ಬೆಂಗಳೂರು, ದಿನಾಂಕ-11-07-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ,

ಇವರ ವಿರುದ್ಧದ ಪ್ರಕರಣವು ಸಾಭೀತಾಗದೆ ಇರುವುದರಿಂದ ಸದರಿಯವರ ವಿರುದ್ಧದ ಪ್ರಕರಣವನ್ನು ಕೈಬಿಟ್ಟು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್-ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಲಕ್ಷ್ಮಿನಾರಾಯಣ ಹೆಚ್.ಎನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.